## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಡಿ. ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಜಾಕೀರ್ ಹುಸೇನ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಇವರುಗಳ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

ಓದಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 409 ಜಿಪಅ 2011, ದಿನಾಂಕ: 10-02-2012
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ : ಜಿಪಂಬ/ಸಿಬ್ಬಂದಿ(4)/ಸಿಸಿಎ/38/ 2011-12, ದಿನಾಂಕ.17-04-2012.

ಪ್ರಸ್ತಾವನೆ:

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2010-11ನೇ ಸಾಲಿನಲ್ಲಿ ಎಂ.ಗೋನಾಳ್ ಗ್ರಾಮದಲ್ಲಿ ರಸ್ತೆ ಕಾಮಗಾರಿ ಮತ್ತು ಒಳಚರಂಡಿ ನಿರ್ಮಾಣದ ಒಂದೇ ಕಾಮಗಾರಿಗೆ ಎರಡು ಅಂದಾಜು ಪಟ್ಟಿ ತಯಾರಿಸಿ, ಖೊಟ್ಟಿ ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡು, ಸುಳ್ಳು ಲೆಕ್ಕ ಪತ್ರಗಳನ್ನು ಬರೆದು ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆಂಬ ಆರೋಪದ ಮೇಲೆ ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಜಾಕೀರ್ ಹುಸೇನ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಪ್ರಸ್ತುತ ಸಹಾಯಕ ಯೋಜನಾಧಿಕಾರಿ ಇವರುಗಳನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:10-02-2012ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರು ಸಲ್ಲಿಸಿರುವ ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ:17-04-2012ರ ವರದಿಯನ್ನು ಪರಿಶೀಲಿಸಲಾಗಿ, ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಜಾಕೀರ್ ಹುಸೇನ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ)ಇವರುಗಳು ಈ ಪ್ರಕರಣದಲ್ಲಿ ಭಾಗಿಗಳಾಗಿರುವುದು ಕಂಡುಬಂದಿರುವುದಿಲ್ಲ, ಮೇಲಿನ ಎಲ್ಲಾ ಕರ್ತವ್ಯಲೋಪಗಳಿಗೆ ಹಾಗೂ ಹಣ ದುರುಪಯೋಗಕ್ಕೆ

..2..

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬಳ್ಳಾರಿಯವರು ಜವಾಬ್ದಾರರಾಗಿರುವುದು ಕಂಡುಬರುತ್ತದೆ. ಆದ್ದರಿಂದ ಈ ಇಬ್ಬರು ಅಧಿಕಾರಿಗಳ ಅಮಾನತ್ತನ್ನು ತೆರವುಗೊಳಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 409 ಜಿಪಅ 2011 (ಭಾಗ),**

**ಬೆಂಗಳೂರು, ದಿನಾಂಕ:17.05.2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಡಿ. ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಜಾಕೀರ್ ಹುಸೇನ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಪ್ರಸ್ತುತ ಸಹಾಯಕ ಯೋಜನಾಧಿಕಾರಿ ಇವರುಗಳ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿದೆ.

ಶ್ರೀ ಡಿ. ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಸೇವೆಯನ್ನು ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಿದೆ.

ಶ್ರೀ ಜಾಕೀರ್ ಹುಸೇನ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ಪ್ರತ್ಯೇಕವಾಗಿ ಸ್ಥಳನಿಯುಕ್ತಿಗೊಳಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
17/5/12
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ/ರಾಯಚೂರು
6. ಸಂಬಂಧಪಟ್ಟ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ & ಸಿ)
8. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
9. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
10. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.